# ಕನ್ನಡ

## ನಾಡು,ನುಡಿ,ಸಂಸ್ಕೃತಿ ,ಸಾಹಿತ್ಯ ,ಸಾಧನೆ

# ವಿಷಯಗಳು:

- ಪರಿಚಯ
- ನಾಡು, ನುಡಿ
- ಭಾಷೆ
- ಸಂಸ್ಕೃತಿ
- ಕವಿ
- ಸಾಧಕರು



# ಪರಿಚಯ

- ಹೆಸರು: ಕಿಶೋರ್ ರ್
- ವರ್ಗ : ೧ ನೆ ಬಿ . ಕೊಮ್
  A ವಿಭಾಗ



# ನಾಡು , ನುಡಿ





# ನಾಡು , ನುಡಿ

ನವೆಂಬರ್ 1, ಕನ್ನಡಿಗರಿಗೆಲ್ಲ ಸಂಭ್ರಮ ಮತ್ತು ಸಡಗರದ ದಿನ. ಹಾಗೆಯೇ ಕನ್ನಡ ನಾಡು-ನುಡಿಯ ಅಭಿವೃದ್ಧಿಯ ಬಗ್ಗೆ ಗಂಭೀರವಾಗಿ ಚಿಂತನೆ ನಡೆಸುವ ದಿನವೂ ಆಗಿದೆ.

ಸರಿಸುಮಾರು ಎರಡೂವರೆ ಸಾವಿರ ವರ್ಷಗಳ ಸಾಂಸ್ಕೃತಿಕ ಇತಿಹಾಸವನ್ನು ಹೊಂದಿದ ಈ ಕನ್ನಡ ನಾಡನ್ನು ಶಾತವಾಹನ, ಗಂಗ, ಕದಂಬ, ಚಾಲುಕ್ಯ, ರಾಷ್ಟ್ರಕೂಟ ಹೊಯ್ಸಳ ಮುಂತಾದ ರಾಜವಂಶದವರು ಆಳುವುದಲ್ಲದೆ ರಾಷ್ಟ್ರದ ಇತಿಹಾಸದಲ್ಲಿ ತಮ್ಮ ಕೀರ್ತಿಗಾಥೆಯನ್ನು ಸುವರ್ಣಾಕ್ಷರಗಳಿಂದ ದಾಖಲಿಸಿದ್ದಾರೆ.

ಬೇಲೂರು-ಹಳೆಬೀಡು, ಬದಾಮಿ-ಪಟ್ಟದಕಲ್ಲು, ಐಹೊಳೆ ಹಂಪಿ ಮುಂತಾದ ಸ್ಥಳಗಳು ನಮ್ಮ ಭವ್ಯ ಇತಿಹಾಸ ಮತ್ತು ಪರಂಪರೆಗೆ ಸಾಕ್ಷಿಯಾಗಿವೆ. ಪ್ರಾಚೀನ ಕಾಲದಿಂದಲೂ ನಮ್ಮ ನಾಡು ಧರ್ಮ, ಸಾಹಿತ್ಯ, ಸಂಗೀತ, ನೃತ್ಯ, ಕಲೆ, ಕ್ರೀಡೆ, ಶಿಲ್ಪ ಮತ್ತು ವಾಸ್ತು ಶಿಲ್ಪಗಳಿಗೆ ಹೆಸರಾದುದು.

ಶೈವ, ವೈಷ್ಣವ, ಜೈನ, ಬೌದ್ಧ, ಲಿಂಗಾಯತ, ಇಸ್ಲಾಂ, ಕ್ರೈಸ್ತ ಮುಂತಾದ ಧರ್ಮಗಳಿಗೆ ಆಶ್ರಯ ನೀಡಿ 'ಸರ್ವಧರ್ಮಧೇನು ನಿವಹಕ್ಕಾಡುಂಬೊಲಂ' ಎಂಬ ಕವಿವಾಣಿಗೆ ಅನ್ವರ್ಥಕವಾದುದು ಈ ಕನ್ನಡನಾಡು.

ಒಂದೊಮ್ಮೆ ಕಾವೇರಿಯಿಂದ ಗೋದಾವರಿಯ ತೀರದವರೆಗೆ ಹಬ್ಬಿದ ನಮ್ಮ ವಿಶಾಲವಾದ ಕನ್ನಡ ನಾಡು ವಸಾಹತುಶಾಹಿಯ ಆಡಳಿತದ ಪರಿಣಾಮವಾಗಿ ಹರಿದು ಹಂಚಿಹೋಗಿತ್ತು.

ಕನ್ನಡತ್ವ ಮತ್ತು ಕರ್ನಾಟಕತ್ವದ ಪ್ರಜ್ಞೆ ಮಾಯವಾಗಿದ್ದ ಆ ಸಂದರ್ಭದಲ್ಲಿ ಡೆಪ್ಯೂಟಿ ಚೆನ್ನಬಸಪ್ಪ,

ಆಲೂರ ವೆಂಕಟರಾಯರಂಥ ಅನೇಕ ಪುಣ್ಯಜೀವಿಗಳು ಆ ಪ್ರಜ್ಞೆಯನ್ನು ಮರುಸ್ಥಾಪಿಸಿ ಕನ್ನಡದ ಸಾಂಸ್ಕೃತಿಕ ನೆಲೆಯನ್ನು ಗಟ್ಟಿಗೊಳಿಸಿದರು. ಭಾರತದ ಸ್ವಾತಂತ್ರ್ಯ, ಕರ್ನಾಕದ ಏಕೀಕರಣ




ಇವೆರಡೂ ಏಕಕಾಲದಲ್ಲಿ ನಡೆದು ಸ್ವತಂತ್ರ ಭಾರತದಲ್ಲಿ 1956ರ ನವೆಂಬರ 1ರಂದು ನಮ್ಮ ಚೆಲುವ ಕನ್ನಡ ನಾಡು ಉದಿಸಿ ಕನ್ನಡಿಗರೆಲ್ಲ ಸಂಭ್ರಮಪಡುವಂತಾದದ್ದು ಇಂದು ಇತಿಹಾಸ.

ಕರ್ನಾಟಕದಷ್ಟೇ ಪ್ರಾಚೀನತೆ ಹಾಗು ಶ್ರೀಮಂತ ಪರಂಪರೆಯನ್ನು ಹೊಂದಿರುವಂತಹದ್ದು ನಮ್ಮ ತಾಯ್ನುಡಿ ಕನ್ನಡ. ದ್ರಾವಿಡ ಭಾಷೆಗಳಲ್ಲಿ ಮುಕುಟಪ್ರಾಯವಾಗಿರುವ ಕನ್ನಡವು ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿಗಳ ಜೊತೆಗೆ ಶಾಸ್ತ್ರೀಯ ಸ್ಥಾನಮಾನ ಪಡೆದ ಮೃದು-ಮಧುರ ಭಾಷೆಯಾಗಿದೆ.


ಭಾಷೆ

# ಕನ್ನಡ

ಕನ್ನಡ ಎಂದರೆ ಕೇವಲ ವರ್ಣಮಾಲೆಯಲ್ಲ, ಅದು ಕರುನಾಡ ನೆಲ, ಜಲ, ಜನ, ಬದುಕು, ಸಾಹಿತ್ಯ, ಸಂಸ್ಕೃತಿ, ಕಲೆ, ಸಂಗೀತ ಎಲ್ಲವನ್ನೂ ಒಳಗೊಂಡಿದೆ. ಕಲಿಯೋಕೆ ಕೋಟಿ ಭಾಷೆ, ಆಡೋಕೆ ಒಂದೇ ಭಾಷೆ ಕನ್ನಡ... ಕನ್ನಡ. ಕಸ್ತೂರಿ. ಕನ್ನಡ. ಹುಟ್ಟಿದರೆ ಕನ್ನಡ ನಾಡಲ್ ಹುಟ್ಟಬೇಕು. ಮೆಟ್ಟಿದರೆ ಕನ್ನಡ ಮಣ್ಣ ಮೆಟ್ಟಬೇಕು. “ಕನ್ನಡ ಭಾಷೆ ನಮ್ಮ ಸಂಸ್ಕೃತಿ”, ಭಾರತವು ಶ್ರೀಮಂತ ಸಂಸ್ಕೃತಿಯನ್ನು ಹೊಂದಿದೆ ಮತ್ತು ಅದು ನಮ್ಮ ಗುರುತಾಗಿದೆ. ಧರ್ಮ, ಕಲೆ, ಬೌದ್ಧಿಕ ಸಾಧನೆಗಳು ಅಥವಾ ಪ್ರದರ್ಶನ ಕಲೆಗಳಲ್ಲಿ ಅದು ನಮ್ಮನ್ನು ವರ್ಣರಂಜಿತ, ಶ್ರೀಮಂತ ಮತ್ತು ವೈವಿಧ್ಯಮಯ ರಾಷ್ಟ್ರವನ್ನಾಗಿ ಮಾಡಿದೆ. ಭಾರತೀಯ ಸಂಸ್ಕೃತಿ ಮತ್ತು ಸಂಪ್ರದಾಯ ಮಾರ್ಗದರ್ಶಿಯಾಗಿ ಆಗಿದೆ.



ಕರ್ನಾಟಕದಲ್ಲಿ ಬಳಸಲಾಗುವ ಕನ್ನಡ ಭಾಷೆಯನ್ನು ದೇಶದ ಪ್ರಮುಖ ಭಾಷೆಗಳಲ್ಲಿ ಒಂದಾಗಿ ಭಾರತೀಯ ಸಂವಿಧಾನವು ಗುರುತಿಸಿದೆ. ಕರ್ನಾಟಕದ ಬಹುತೇಕ ಜನರಿಗೆ ಕನ್ನಡವು ಮಾತೃಭಾಷೆಯಾಗಿದೆ. ನೆರೆಯ ರಾಜ್ಯಗಳಾದ ಆಂಧ್ರಪ್ರದೇಶ, ಮಹಾರಾಷ್ಟ್ರ, ತಮಿಳುನಾಡು, ಕೇರಳ, ಗೋವಾ, ಹಾಗೂ ದಮನ್ ಹಾಗೂ ದಿಯುಗಳಲ್ಲಿ ಕನ್ನಡವನ್ನು ಮಾತೃ ಭಾಷೆಯಾಗಿ ಬಳಸುವ ಗಣನೀಯ ಸಂಖ್ಯೆಯ ಜನರಿದ್ದಾರೆ.ಪ್ರಸ್ತುತದಲ್ಲಿ, ಕನಿಷ್ಠ ಮೂರು ಪ್ರಾದೇಶಿಕ ಉಪಭಾಷೆಗಳಾದ, ಮೈಸೂರು ಕನ್ನಡ, ಧಾರವಾಡ-ಕನ್ನಡ ಹಾಗೂ ಮಂಗಳೂರು-ಕನ್ನಡಗಳ ಜನಪ್ರಿಯವಾದ ಭಾಷಾ ಶೈಲಿಗಳನ್ನು, ಕ್ರಮವಾಗಿ ಮೂರು ಸಾಂಸ್ಕೃತಿಕ ಕೇಂದ್ರಗಳಾದ ಮೈಸೂರು, ಧಾರವಾಡ ಹಾಗೂ ಮಂಗಳೂರು ಪ್ರದೇಶಗಳಲ್ಲಿ ಮಾತನಾಡಲಾಗುತ್ತದೆ.



ಕರುನಾಡು ಸ್ವರ್ಗದ ಸೀಮೆ-ಕಾವೇರಿ ಹುಟ್ಟಿದ ನಾಡು. ಕಲ್ಲಲ್ಲಿ ಕಲೆಯನು ಕಂಡ-ಬೇಲೂರ ಶಿಲ್ಪದ ಬೀಡು. ಕಲಿಯೋಕೆ ಕೋಟಿ ಭಾಷೆ, ಆಡೋಕೆ ಒಂದೇ ಭಾಷೆ ಕನ್ನಡ. ವಿಶ್ವಖ್ಯಾತಿಯ ವಿಶ್ವೇಶ್ವರಯ್ಯ ಜನಿಸಿದ ಈ ನಾಡು. ಇದೆ ನಾಡು- ಇದೆ ಭಾಷೆ ಎಂದೆಂದೂ ನನ್ನದಾಗಿರಲಿ ಎಂಬ ಎಸ್.ಪಿ.ಬಿ ಅವರ ಗಾಯನದಂತೆ ಎಲ್ಲೇ ಇರಲಿ ಹೇಗೆ ಇರಲಿ ನಮ್ಮ ಉಸಿರಲ್ಲಿ ಕನ್ನಡ ಸದಾ ಅಚ್ಚ ಹಸಿರಾಗಿರಲಿ ಎಂಬುದು ನಮ್ಮ ಆಶಯ. ನಾವು ನಮ್ಮ ಕನ್ನಡದ ಸುಗ್ಗಿಯನ್ನು ಕೇವಲ ನವೆಂಬರ್ ಮಾಸದಲ್ಲಿ ಮಾತ್ರವಲ್ಲ ಪ್ರತಿ ದಿನ ಆಚರಿಸಬೇಕು.

ಸರ್ವ ಜನಾಂಗದ ಶಾಂತಿಯ ತೋಟ ನಮ್ಮ ನಾಡು. ಎಲ್ಲಾದರೂ ಇರು ಎಂತಾದರೂ ಇರು ಎಂದೆಂದಿಗೂ ನೀ ಕನ್ನಡವಾಗಿರು ಎಂಬಂತೆ ನಾವು ದೇಶದ ಯಾವುದೇ ಮೂಲೆಯಲ್ಲಿದ್ದರು ಕನ್ನಡವನ್ನು ಉಳಿಸಿ, ಬೆಳೆಸುವ ಸಂಸ್ಕೃತಿ ಪ್ರತಿಯೊಬ್ಬನ ಕನ್ನಡಿಗನದಾಗಲಿ.

# ಸಂಸ್ಕೃತಿ



# ಸಂಸ್ಕೃತಿ

ನಮ್ಮ ನೆರೆಯ ಸಂಸ್ಕೃತಿಗಳಿಗೆ ಹೋಲಿಸಿದರೆ ನಾವು ಅನೇಕ ಸಾಂಸ್ಕೃತಿಕ ಹೋಲಿಕೆಗಳನ್ನು ನೋಡುತ್ತೇವೆ ಮತ್ತು ಭಾಷೆ ಸಂಸ್ಕೃತಿಯ ವಿಶಿಷ್ಟ ಗುರುತಾಗುತ್ತದೆ. ಅದೇ ಸಮಯದಲ್ಲಿ, ಕರ್ನಾಟಕ ಮತ್ತು ಕನ್ನಡ ಭಾಷೆಯ ಪ್ರದೇಶಗಳ ಒಂದೇ ವ್ಯಾಪ್ತಿಯಲ್ಲಿ, ನಾವು ವೈವಿಧ್ಯಮಯ ಸಾಂಸ್ಕೃತಿಕ ಆಚರಣೆಗಳು ಮತ್ತು ಬಳಕೆಗಳನ್ನು ನೋಡುತ್ತೇವೆ. ಆದ್ದರಿಂದ ಇಡೀ ಸಂಸ್ಕೃತಿಯ ಪ್ರಧಾನ ಲಕ್ಷಣವಾಗಿ ಭಾಷೆಯನ್ನು ಮಾತ್ರ ಪರಿಗಣಿಸುವ ಮಿತಿಗಳ ಬಗ್ಗೆ ನಾವು ಜಾಗರೂಕರಾಗಿರಬೇಕು. ಸಂಸ್ಕೃತಿಯು ತನ್ನ ಅಭಿವ್ಯಕ್ತಿಗೆ ಕೇವಲ ಭಾಷೆಯ ಮೇಲೆ ಅವಲಂಬಿತವಾಗಿಲ್ಲ.

ಭಾರತವು ಶ್ರೀಮಂತ ಸಂಸ್ಕೃತಿಯನ್ನು ಹೊಂದಿದೆ ಮತ್ತು ಅದು ನಮ್ಮ ಗುರುತಾಗಿದೆ. ಧರ್ಮ, ಕಲೆ, ಬೌದ್ಧಿಕ ಸಾಧನೆಗಳು ಅಥವಾ ಪ್ರದರ್ಶನ ಕಲೆಗಳಲ್ಲಿ ಅದು ನಮ್ಮನ್ನು ವರ್ಣರಂಜಿತ, ಶ್ರೀಮಂತ ಮತ್ತು ವೈವಿಧ್ಯಮಯ ರಾಷ್ಟ್ರವನ್ನಾಗಿ ಮಾಡಿದೆ. ಭಾರತೀಯ ಸಂಸ್ಕೃತಿ ಮಾರ್ಗದರ್ಶನವಾಗಿದೆ.



ಜನರು ಇಂದು ಆಧುನಿಕರಾಗಿದ್ದರೂ ನೈತಿಕ ಮೌಲ್ಯಗಳನ್ನು ಉಳಿಸಿಕೊಂಡು ಆಚರಣೆಗೆ ತಕ್ಕಂತೆ ಹಬ್ಬಗಳನ್ನು ಆಚರಿಸುತ್ತಾರೆ. ಆದ್ದರಿಂದ, ನಾವು ಇನ್ನೂ ಬದುಕುತ್ತಿದ್ದೇವೆ ಮತ್ತು ರಾಮಾಯಣ ಮತ್ತು ಮಹಾಭಾರತದಿಂದ ಮಹಾಕಾವ್ಯದ ಪಾಠಗಳನ್ನು ಕಲಿಯುತ್ತಿದ್ದೇವೆ.ಅಲ್ಲದೆ,ಗುರುದ್ವಾರಗಳು,ದೇವಾಲಯಗಳು, ಚರ್ಚ್‌ಗಳು ಮತ್ತು ಮಸೀದಿಗಳಿಗೆ ಜನರು ಇನ್ನೂ ಸೇರುತ್ತಾರೆ.

ಭಾರತವು ಅನೇಕ ಸಂಸ್ಕೃತಿಗಳನ್ನು ಹೀರಿಕೊಂಡು ಮುನ್ನಡೆದಿರುವುದರಿಂದ ಪ್ರಬಲ ಮತ್ತು ಬಹು-ಸಂಸ್ಕೃತಿಯ ಸಮಾಜವಾಗಿ ನಿಂತಿದೆ. ಇಲ್ಲಿನ ಜನರು ವಿವಿಧ ಧರ್ಮ , ಸಂಪ್ರದಾಯ ಮತ್ತು ಪದ್ಧತಿಗಳನ್ನು ಅನುಸರಿಸಿದ್ದಾರೆ.







ಭಾರತದಲ್ಲಿನ ಸಂಸ್ಕೃತಿಯು ಜನರ ಜೀವನ, ಆಚರಣೆಗಳು, ಮೌಲ್ಯಗಳು, ನಂಬಿಕೆಗಳು, ಅಭ್ಯಾಸಗಳು, ಕಾಳಜಿ, ಜ್ಞಾನ, ಇತ್ಯಾದಿಗಳಿಂದ ಎಲ್ಲವೂ ಆಗಿದೆ. ಅಲ್ಲದೆ, ಭಾರತವನ್ನು ಅತ್ಯಂತ ಹಳೆಯ ನಾಗರಿಕತೆ ಎಂದು ಪರಿಗಣಿಸಲಾಗಿದೆ.ಅಲ್ಲಿ ಜನರು ತಮ್ಮ ಹಳೆಯ ಕಾಳಜಿ ಮತ್ತು ಮಾನವೀಯತೆಯನ್ನು ಇನ್ನೂ ಅನುಸರಿಸುತ್ತಾರೆ.ಅನೇಕ ವಿಭಿನ್ನ ಯುಗಗಳು ಬಂದು ಹೋಗಿವೆ ಆದರೆ ನಿಜವಾದ ಸಂಸ್ಕೃತಿಯ ಪ್ರಭಾವವನ್ನು ಬದಲಾಯಿಸಲು ಯಾವುದೇ ಯುಗವು ತುಂಬಾ ಶಕ್ತಿಯುತವಾಗಿಲ್ಲ.

ಕನ್ನಡ ಸಂಸ್ಕೃತಿಯಲ್ಲಿ ಜಾನಪದ ನೃತ್ಯ, ಹಾಡು, ನಾಟಕ, ಕಲೆ, ವೇಷಭೂಷಣಗಳು ಆಚರಣೆಗಳು, ಆಡಂಬರಗಳು ಕನ್ನಡದ ಸಂಸ್ಕೃತಿಯನ್ನು ಹೆಚ್ಚಿಸುತ್ತದೆ.


# ಕವಿಗಳು



# ಕನ್ನಡ ಪ್ರಸಿದ್ಧ ಕವಿಗಳು




ಕುವೆಂಪು




ಶಿವರಾಮ್ ಕಾರಂತ್



ಗಿರೀಶ್ ಕಾರ್ನಾಡ್




ಕನಕ ದಾಸ




ಪುರಂದರ ದಾಸ




ಅಕ್ಕ ಮಹಾದೇವಿ



ದ.ರಾ.ಬೇಂದ್ರೆ



ಚಂದ್ರಶೇಖರ ಕಂಬಾರ




ಮಾಸ್ತಿ ವೆಂಕಟೇಶ್ ಅಯ್ಯಂಗಾರ್

# ಸಾಧಕರು



ಕರ್ನಾಟಕ ಬಹಳಷ್ಟು ಸಾಧಕರ ತವರಾಗಿದ್ದು ಕರ್ನಾಟಕದ ಹೆಮ್ಮೆ ಹಾಗು ಕೀರ್ತಿಗೆ ಕಾರಣವಾಗಿದೆ . ಆ ಸಾಧಕರಲ್ಲಿ ಕೆಲವರು :

- ಕ್ರಿಕೆಟರ್ ರಾಹುಲ್ ದ್ರಾವಿಡ್
- ರಂಗಭೂಯ ಭೀಷ್ಮ ಬಿ.ವಿ.ಕಾರಂತ್
- ಲೇಖಕ ವಿನಾಯಕ ಕೃಷ್ಣ ಗೋಕಕ್
- ನಟ ಡಾ . ರಾಜಕುಮಾರ್
- ವಿಜ್ಞಾನಿ  ಸಿ.ವಿ.ರಾಮನ್
- ಅಭಿಯಂತರ  ಮೋಕ್ಷಗುಂಡಂ ವಿಶ್ವೇಶ್ವರಯ್ಯ
- ಫೀಲ್ಡ್ ಮಾರ್ಷಲ್ ಕೆ.ಎಂ.ಕಾರಿಯಪ್ಪ
- ಕ್ರಿಕೆಟರ್ ಅನಿಲ್ ಕುಂಬ್ಳೆ
- ಗಾಯಕಿ ಗಂಗೂಬಾಯಿ ಹಾರಂಗಲ್




ಧನ್ಯವಾದಗಳು